**ಸಾಕ್ಷಿಗೆ ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**<u>ಮುಖ್ಯವಿಚಾರಣೆಃ ವಾದಿ ಪರವಾಗಿ ಶ್ರೀ ಜೆ.ಪಿ.ಎ. ವಕೀಲರಿಂದಃ</u>**

ನಾನು ನನ್ನ ಮುಖ್ಯ ವಿಚಾರಣೆಯ ಬದಲಿಗೆ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿರುವ ಸಂಗತಿಗಳು ಸತ್ಯವಾಗಿದ್ದು, ಅದನ್ನು ನಾನೇ ನಮ್ಮ ವಕೀಲರಿಗೆ ಹೇಳಿ ಬರೆಸಿರುತ್ತೇನೆ.

ಈ ದಾವೆಗೆ ಪೂರಕವಾಗಿ ನಾನು ಈ ಕೆಳಕಂಡ ದಾಖಲೆಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ಈ ಕೆಳಗಿನಂತೆ ನಿಶಾನೆಗಳಾಗಿ ಗುರುತಿಸಲಾಯಿತು.

| | |
|---|---|
| ನಿ.ಪಿ.-1 | ಮುಟೇಷನ್ |
| ನಿ.ಪಿ.-2 | ನಕಾಶೆ |
| ನಿ.ಪಿ.-3 | ಪೌರಸಭೆ ಮುಖ್ಯಾಧಿಕಾರಿಗಳಿಗೆ ಕೊಟ್ಟಿದ್ದ ಅರ್ಜಿ |
| ನಿ.ಪಿ.-4 | ಮುಖ್ಯಾಧಿಕಾರಿಗಳು ಕೊಟ್ಟಿರುವ ಹಿಂಬರ |
| ನಿ.ಪಿ.-5 | ಕಟ್ಟಡ ಕಟ್ಟಲು ಪರವಾನಿಗೆ ಕೊಡುವಂತೆ ಪಂಚಾಯತಿಗೆ ಕೊಡಲಾಗಿರುವ ಅರ್ಜಿ |
| ನಿ.ಪಿ.-6 | ಪಂಚನಾಮೆ |
| ನಿ.ಪಿ.-7 | ನಕಾಶೆ |

ನನ್ನ ಮುಖ್ಯ ವಿಚಾರಣೆ ಪ್ರಮಾಣ ಪತ್ರ ಹಾಗೂ ನಾನು ಹಾಜರುಪಡಿಸಿದ ದಾಖಲೆಗಳನ್ನು ಪರಿಗಣಿಸಿ ಸದರಿ ದಾವೆಯನ್ನು ಖರ್ಚು ಸಹಿತ ಡಿಕ್ರಿ ಮಾಡಬೇಕಾಗಿ ಕೋರಿಕೊಳ್ಳುತ್ತೇನೆ.

**<u>ಪಾಟೀ ಸವಾಲುಃ ಪ್ರತಿವಾದಿ ವಕೀಲರ ಕೋರಿಕೆಯ ಮೇರೆಗೆ ಮುಂದುಡಲಾಗಿದೆ.</u>**

**(ಮುಕ್ತ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು)**

**ಓ.ಹೇ.ಕೇ. ಸರಿ ಇದೆ.**

**ಪ್ರಧಾನ ಸಿವಿಲ್ ನ್ಯಾಯಾಧೀಶರು,**
**ಚಿಂಚೋಳಿ**